# ಕರ್ನಾಟಕ ಸರ್ಕಾರ

## ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ: 1383814 DPI-CPIOC7-3(HCC)/4/2024 ದಿನಾಂಕ:20-05-2024

::ಜ್ಞಾಪನ::

**ವಿಷಯ:** 5, 8 ಮತ್ತು 9ನೇ ತರಗತಿವಾರು ಮೌಲ್ಯಾಂಕನದ ವಿಶ್ಲೇಷಣೆ ಮಾಡಿ, ವಿದ್ಯಾರ್ಥಿಗಳನ್ನು ಮುಂದಿನ ತರಗತಿಗಳಿಗೆ ದಾಖಲಿಸುವ ಕುರಿತು.

**ಉಲ್ಲೇಖ:** 1. ಘನ ಸರ್ವೋಚ್ಛ ನ್ಯಾಯಾಲಯವು ದಿನಾಂಕ: 08-04-2024 ರಂದು ನೀಡಿರುವ ತಡೆಯಾಜ್ಞೆಯಂತೆ.

2. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ ರವರ ಜ್ಞಾಪನ ಸಂಖ್ಯೆ ಕೆ4/5, 8 ಮತ್ತು 9ನೇ .ಮೌ/06/2023-24 ದಿನಾಂಕ: 06-04-2024.

3. ಪೋಷಕರು, ಶಾಲಾ ಆಡಳಿತ ಮಂಡಳಿಯವರು ಮತ್ತು ಶಾಲಾ ಮುಖ್ಯಸ್ಥರು ಮನವಿಗಳ ಮೇರೆಗೆ.

*****

2023-24ನೇ ಸಾಲಿನ 5, 8 ಮತ್ತು 9ನೇ ತರಗತಿ SA-2 ಮೌಲ್ಯಾಂಕನ ಕಾರ್ಯ ಮುಗಿದಿದ್ದು, ಉಲ್ಲೇಖ-2ರಂತೆ ರಾಜ್ಯದ ಎಲ್ಲಾ ಶಾಲೆಗಳಲ್ಲಿ ದಿನಾಂಕ: 08-04-2024ರಂದು ಫಲಿತಾಂಶವನ್ನು ಪ್ರಕಟಿಸಲು ತಿಳಿಸಲಾಗಿರುತ್ತದೆ. ತದನಂತರದಲ್ಲಿ ಫಲಿತಾಂಶವನ್ನು ಪ್ರಕಟಿಸಲು ಘನ ಸರ್ವೋಚ್ಛ ನ್ಯಾಯಾಲಯವು ತಡೆಯಾಜ್ಞೆಯನ್ನು ನೀಡಿದ್ದು, ಅಂತಿಮ ತೀರ್ಪು ಬಾಕಿ ಇರುತ್ತದೆ.

ಪ್ರಸ್ತುತ 2023-24ನೇ ಸಾಲಿನ ಶೈಕ್ಷಣಿಕ ವರ್ಷ ಅಂತ್ಯಗೊಳ್ಳುತ್ತಿದ್ದು , ದಿನಾಂಕ: 29-05-2024 ರಿಂದ 2024-25ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭವಾಗಲಿದೆ. 2023-24ನೇ ಸಾಲಿನಲ್ಲಿ ವ್ಯಾಸಂಗ ಮಾಡಿದ 5, 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳ ಫಲಿತಾಂಶ ಪ್ರಕಟಿಸದೇ ಇರುವುದರಿಂದ ಅವರನ್ನು ಮುಂದಿನ ಶೈಕ್ಷಣಿಕ ವರ್ಷಕ್ಕೆ/ತರಗತಿಗೆ ಶಾಲಾ ಪ್ರವೇಶ/ದಾಖಲಾತಿ ಮಾಡಲು, ಪ್ರವೇಶ ಶುಲ್ಕ ಪಾವತಿಸಲು ಹಾಗೂ ಬೇರೆ ಸ್ಥಳಗಳಿಗೆ ವರ್ಗಾವಣೆ ಹೊಂದಿರುವ ಪ್ರಯುಕ್ತ ಮಕ್ಕಳ ವರ್ಗಾವಣೆ ಪ್ರಮಾಣಪತ್ರ ಪ್ರಗತಿ ಪತ್ರ ಮತ್ತು ವ್ಯಾಸಂಗ ಪ್ರಮಾಣಪತ್ರಗಳನ್ನು ವಿತರಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಉಲ್ಲೇಖ-3ರನ್ವಯ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಅಗತ್ಯ ಕ್ರಮ ವಹಿಸುವಂತೆ ಕೋರಿರುತ್ತಾರೆ. ಅದರಂತೆ ಮಕ್ಕಳ ಶೈಕ್ಷಣಿಕ ಭವಿಷ್ಯ ಸುಗಮಗೊಳಿಸಲು ಈ ಕೆಳಕಂಡಂತೆ ಕ್ರಮವಹಿಸುವುದು.

ಘನ ಸರ್ವೋಚ್ಛ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣ ಸಂಖ್ಯೆ:8142/2024, 8136/2024 ಮತ್ತು 8127/2024ರ ಮಧ್ಯಂತರ ತೀರ್ಪಿನಂತೆ, 2023-24ನೇ ಸಾಲಿನ 5, 8 ಮತ್ತು 9ನೇ ತರಗತಿ SA-2 ಮೌಲ್ಯಾಂಕನವನ್ನು ತಡೆಹಿಡಿದಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈಗಾಗಲೇ ಶಾಲೆಗಳಲ್ಲಿ ನಡೆದಿರುವ FA-1, FA-2, FA-3, FA-4 ಮತ್ತು SA-1 ಗಳ ಮೌಲ್ಯಾಂಕನದ ಆಧಾರದ ಮೇಲೆ ಮಕ್ಕಳನ್ನು ಮುಂದಿನ ಶೈಕ್ಷಣಿಕ ತರಗತಿಗೆ ಮುಂದುವರೆಸಲು ಅವಕಾಶ ಕಲ್ಪಿಸುವುದು.

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಇವರಿಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ತಾಲ್ಲೂಕು/ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು:

1. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ಇವರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ..
2. ಅಧ್ಯಕ್ಷರು, ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಬೆಂಗಳೂರು ರವರಿಗೆ ಅಗತ್ಯ ಕ್ರಮಕ್ಕಾಗಿ.
3. ಕಛೇರಿ ಕಡತಕ್ಕಾಗಿ.